ಕರ್ನಾಟಕ ವಿಧಾನ ಪರಿಷತ್ತು

1)	ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	100
2)	ಸದಸ್ಯರ ಹೆಸರು	ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮ-ನಿರ್ದೇಶನ ಹೊಂದಿದವರು)
3)	ಉತ್ತರಿಸಬೇಕಾದ ದಿನಾಂಕ	16-02-2022
4)	ಉತ್ತರಿಸಬೇಕಾದ ಸಚಿವರು	ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

	ಪ್ರಶ್ನೆ	ಉತ್ತರ
ಅ)	ವಿಜಯಪುರ ಜಿಲ್ಲೆಯಲ್ಲಿ ಸುಮಾರು 250 ಕೆರೆಗಳಿದ್ದು, ಡೋಣಿ ನದಿ 150 ಕಿ.ಮೀ. ಹರಿಯುತ್ತಿದ್ದು, ಹಾಗೂ ಆಲಮಟ್ಟಿ ಹಿನ್ನೀರಿನಿಂದ ಮೀನುಗಾರಿಕೆಗೆ ಹೆಚ್ಚಿನ ಅವಕಾಶ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ)	ಮೀನುಗಾರಿಕೆಯನ್ನು ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ವಿಜಯಪುರ ಜಿಲ್ಲೆಯಲ್ಲಿ ಮೀನುಗಾರಿಕೆಯನ್ನು ಉತ್ತೇಜಿಸಲು ಇಲಾಖೆಯಿಂದ ಹಮ್ಮಿಕೊಂಡಿರುವ ವಿವಿಧ ಯೋಜನೆಗಳ ವಿವರಗಳನ್ನು **<u>ಅನುಬಂಧ-1</u>**ರಲ್ಲಿ ನೀಡಲಾಗಿದೆ.

ಸಂಖ್ಯೆ: ಪಸಂಮೀ ಇ-20 ಮೀಇಯೋ 2022

(ಎಸ್. ಅಂಗಾರ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

KARNATAKA LEGISLATIVE COUNCIL

1	Starred Question No	: 100
2	Name of the M.L.C	: Sri Prakash k. Rathod (Nominated)
3	Date of Reply	: 16-02-2022
4	Replied by	: Fisheries, Port and Inland Water Transport Minister

Sl. No	Question	Answer
a)	Has it come to the notice of the Government that Vijayapura District has approximately 250 tanks, 150 km flowing Doni river and plenty of opportunities to increase Fisheries in the backwaters of Alamatti;	Yes.
b)	What are the initiatives taken by the Government to promote Fisheries?	The details of various Schemes implemented by the Department to promote fisheries in Vijayapura District are furnished in **Annexure-1**.

No. AHF E-20 FSFS 2022

(S. ANGARA)
Minister for Fisheries,
Ports and Inland Water Transport

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 100 ಕ್ಕೆ

ಅನುಬಂಧ-1

- "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಬಲಪಡಿಸುವ ಉದ್ದೇಶದಿಂದ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲಾಗುತ್ತಿದೆ. 2021-22ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯ 13 ಕೆರೆಗಳಿಗೆ ರೂ.14.61 ಲಕ್ಷಗಳ ವೆಚ್ಚದಲ್ಲಿ 11.32 ಲಕ್ಷ ಬಲಿತ ಬಿತ್ತನೆ ಮೀನುಮರಿಗಳನ್ನು ದಾಸ್ತಾನು ಮಾಡಲಾಗಿದೆ.

- ಕೆರೆ / ಜಲಾಶಯಗಳ ಅಂಚಿನಲ್ಲಿ ನಿರ್ಮಿಸಿದ ಕೊಳಗಳಲ್ಲಿ ಮೀನುಮರಿ ಪಾಲನೆ ಮಾಡಲು ಪ್ರತಿ ಹೆಕ್ಟೇರ್ ಗೆ ರೂ.2.50 ಲಕ್ಷ ಸಹಾಯಧನ ನೀಡಲಾಗುತ್ತಿದೆ. 2021-22 ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯ 07 ಫಲಾನುಭವಿಗಳಿಗೆ ರೂ.4.18 ಲಕ್ಷಗಳ ಸಹಾಯಧನ ನೀಡಲು ಕ್ರಮವಹಿಸಲಾಗಿದೆ.

- ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ ಯೋಜನೆಯಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚು ಮಾಡಲು ಮತ್ತು ಮೀನುಗಾರರ ಆರ್ಥಿಕ ಮಟ್ಟವನ್ನು ಹೆಚ್ಚಿಸಲು ಜಲಾಶಯಗಳಿಗೆ ಬಲಿತ ಬಿತ್ತನೆ ಮೀನುಮರಿಗಳನ್ನು ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳಲಾಗುತ್ತಿದೆ. 2021-22ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆ ವ್ಯಾಪ್ತಿಯ ಆಲಮಟ್ಟಿ ಜಲಾಶಯ ಮತ್ತು ಬಸವಸಾಗರ ಜಲಾಶಯಕ್ಕೆ ಕ್ರಮವಾಗಿ 13.98 ಲಕ್ಷ ಮತ್ತು 15.00 ಲಕ್ಷ ಬಲಿತ ಬಿತ್ತನೆ ಮೀನುಮರಿಗಳನ್ನು ದಾಸ್ತಾನು ಮಾಡಲಾಗಿದೆ.

- ಒಳನಾಡು ಮೀನುಗಾರರಿಗೆ ಮೀನು ಹಿಡಿಯಲು ಸಲಕರಣೆ ಕಿಟ್ ವಿತರಣೆ ಯೋಜನೆಯಡಿ ಸಲಕರಣೆ ಕಿಟ್ ಖರೀದಿಸಲು ಶೇ.100ರಷ್ಟು ಸಹಾಯಧನ ನೀಡಲಾಗುತ್ತಿದೆ (ಘಟಕ ವೆಚ್ಚ – ರೂ.10,000/-). 2021-22ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯ 70 ಮೀನುಗಾರರಿಗೆ ಮೀನುಗಾರಿಕೆ ಸಲಕರಣೆ ಕಿಟ್ಟುಗಳನ್ನು ಉಚಿತವಾಗಿ ವಿತರಿಸಲಾಗಿದೆ.

- ಉತ್ತರ ಕರ್ನಾಟಕದ ಮೀನುಗಾರಿಕೆ ಅಭಿವೃದ್ಧಿಗಾಗಿ ಬಾಗಲಕೋಟೆಯಲ್ಲಿ ನಿಜಶರಣ ಶ್ರೀ ಅಂಬಿಗರ ಚೌಡಯ್ಯ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ ಸ್ಥಾಪನೆ ಮಾಡಲಾಗಿದ್ದು ಮೀನುಗಾರಿಕೆ ಅಭಿವೃದ್ಧಿಗಾಗಿ ಯೋಜನೆ ಗಳನ್ನು ರೂಪಿಸಲಾಗಿದೆ. 2021-22 ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯ ಆಲಮಟ್ಟಿ ಜಲಾಶಯದ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳಲು ರೂ.60.00 ಅನುದಾನಕ್ಕೆ ಕಾರ್ಯಕ್ರಮ ರೂಪಿಸಲಾಗಿದೆ.

- ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. 2021-22 ನೇ ಸಾಲಿನಲ್ಲಿ ಈ ಯೋಜನೆಯಡಿ ವಿಜಯಪುರ ಜಿಲ್ಲೆಯಲ್ಲಿ ರೂ.61.82 ಲಕ್ಷಗಳ ವೆಚ್ಚದಲ್ಲಿ 41 ಫಲಾನುಭವಿಗಳಿಗೆ ವಿವಿಧ ಚಟುವಟಿಕೆಗಳಿಗಾಗಿ ಸಹಾಯಧನ ನೀಡಲಾಗಿದೆ.

- ಜಿಲ್ಲಾ ವಲಯ ಯೋಜನೆ – ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ ಯೋಜನೆಯಡಿ ಬಾವಿ ಮತ್ತು ಹೊಂಡಗಳಲ್ಲಿ ಮೀನುಕೃಷಿ ಮಾಡುವ ರೈತರಿಗೆ ಮೀನುಮರಿಗಳನ್ನು ಉಚಿತವಾಗಿ ನೀಡಲು ಯೋಜನೆ ಹಮ್ಮಿಕೊಳ್ಳಲಾಗಿದೆ.

- ಜಿಲ್ಲಾ ವಲಯ ಯೋಜನೆ ಮೀನುಮಾರುಕಟ್ಟೆ ಮತ್ತು ಮೀನುಮಾರಾಟಕ್ಕೆ ಸಹಾಯ ಯೋಜನೆಯಡಿ ರೂ.30.00 ಲಕ್ಷಗಳ ಅನುದಾನದಲ್ಲಿ 45 ಫಲಾನುಭವಿಗಳಿಗೆ ಸಹಾಯಧನ ನೀಡಲು ಯೋಜನೆ ಹಮ್ಮಿಕೊಳ್ಳಲಾಗಿದೆ.

******